**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.235/2023**

ಪಿ.ಡಬ್ಲ್ಯೂ: 5

ಸಿ.ಡಬ್ಲ್ಯೂ: 6

ಸಾಕ್ಷಿದಾರರ ಹೆಸರು : ಮೊಹಮ್ಮದ್ ಇಬ್ರಾಹಿಂ

ತಂದೆಯ ಹೆಸರು: :ಅಮೀದ್ ರಾವುತ್ತರ್

ವಯಸ್ಸು : **55 ವರ್ಷ**

ಉದ್ಯೋಗ : ವ್ಯವಸಾಯ

ವಾಸಸ್ಥಳ : ಹಲಸೂರು

**ದಿನಾಂಕ: 05-05-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು 2-3 ವರ್ಷಗಳ ಹಿಂದೆ ನಾನು ಲಕ್ಕವಳ್ಳಿ ಪೊಲೀಸ್ ಠಾಣೆಯಲ್ಲಿ ಅಪಘಾತದ ವಿಚಾರವಾಗಿ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಒಂದು ಛಾಯಚಿತ್ರವನ್ನು ತೋರಿಸಲಾಗಿದ್ದು, ಅದರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: **05-09-2022** ರಂದು ಬೆಳಿಗ್ಗೆ **10-00** ರಿಂದ **10-45** ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತಕ್ಕೀಡಾದ ಕೆಎ **14** ಯು **7877** ನಂಬರಿನ ಬೈಕನ್ನು ಪೊಲೀಸರು ಅಮಾನತ್ತು ಮಹಜರ್ ಮುಖಾಂತರ ಅಮಾನತ್ತುಪಡಿಸಿಕೊಂಡಿದ್ದು, ಸದರಿ ಮಹಜರ್

ಗೆ ಸಹಿ ಮಾಡಿರುತ್ತಿರಾ ಎಂದರೆ ಸರಿ. ಸಾಕ್ಷಿ ಮುಂದುವರಿದು ವಿಚಾರ ತಿಳಿದಿರುವುದಿಲ್ಲ ಎಂದುನುಡಿದಿರತ್ತಾರೆ. ನನ್ನ ಸಮಕ್ಷಮ ಪೊಲೀಸರು ಸದರಿ ಬೈಕನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿ.

**<u>ಪಾಟೀ ಸವಾಲು : ಆರೋಪಿ ಪರ</u>** <u>ಶ್ರೀ ಎ ಆರ್ ಕೆ</u> **<u>ವಕೀಲರಿಂದ.</u>**

ನಾನು ಹಲಸೂರು ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಎಂದರೆ ಸರಿ. ಆದ್ದರಿಂದ ನಮ್ಮ ಊರಿನಲ್ಲಿ ಯಾವುದಾದರೂ ಗಲಾಟೆ ಅಥವಾ ಇತರೆ ವಿಚಾರಗಳಿಗೆ ಠಾಣೆಗೆ ಹೋಗಿ ಬರುತ್ತಿರುತ್ತೇನೆಂದರೆ ಸರಿ. ಆದ್ದರಿಂದ ಪೊಲೀಸರು ಯಾವುದಾದರೂ ದಾಖಲಾತಿಗೆ ಸಹಿ ಮಾಡು ಎಂದರೆ ಅವರ ಕೋರಿಕೆಯ ಮೇರೆಗೆ ಮಾಡುತ್ತಿರಾ ಎಂದರೆ ಸರಿ. ಅಪಘಾತದ ಬಗ್ಗೆ ನನಗೆ ಯಾವುದೇ ವಿಚಾರ ತಿಳಿದಿರುವುದಿಲ್ಲ. ಅಮಾನತ್ತುಪಡಿಸಿಕೊಂಡ ವಾಹನದ ಬಣ್ಣ,ನಂಬರ್ ಯಾವ ಕಂಪನಿಯದ್ದು ಎಂದು ನನಗೆ ತಿಳಿದಿರುವುದಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ಛಾಯಚಿತ್ರಕ್ಕೆ ನಿಂತಿರುತ್ತೇನೆ, ಬೇರೆ ಯಾವ ವಿಚಾರ ತಿಳಿದಿರುವುದಿಲ್ಲ. ನನ್ನ ಸಮಕ್ಷಮ ಮಹಜರ್ ನ್ನು ಬರೆದಿರುವುದಿಲ್ಲ ಎಂದರೆ ಸರಿ.

**<u>ಮರುವಿಚಾರಣೆ</u>:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

1 ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**